# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 162, ಗಿರಿನಗರ, ಬೆಂಗಳೂರು.

### ಆಗಸ್ಟ್ ಮಾಹೆಯ ವಾರ್ಡ್ ಸಮಿತಿ ಸಭೆಯ ನಡವಳಿಗಳು

**************

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ವಾರ್ಡ್ ಸಂಖ್ಯೆ: 162, ಗಿರಿನಗರದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

*****

ದಿನಾಂಕ: 04-09-2021

ಸ್ಥಳ : ವಾರ್ಡ್ ಕಛೇರಿ, ಸ್ವಾಮಿ ವಿವೇಕನಂದ ಉದ್ಯಾನವನ, ಗಿರಿನಗರ

ಸಮಯ : ಪೂರ್ವಾಹ್ನ 10.30 ಗಂಟೆಗೆ

ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ರಘು | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ ಶಿಲ್ಪಶ್ರೀ ಬಿ.ಜಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-162, ಗಿರಿನಗರ |
| 3 | ಶ್ರೀ ಜನಾರ್ಧನ್.ಪಿ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಗಿರಿನಗರ ಉಪವಿಭಾಗ |
| 4 | ಶ್ರೀ ಹೇಮಂತ್ | ಹಿರಿಯ ಆರೋಗ್ಯ ಪರಿವೀಕ್ಷಕರು (ಗಿರಿನಗರ ವಾರ್ಡ್) |
| 5 | ಶ್ರೀ ರವಿ | ಕಿರಿಯ ಆರೋಗ್ಯ ಪರಿವೀಕ್ಷಕರು (ಗಿರಿನಗರ ವಾರ್ಡ್) |
| 6 | ಶ್ರೀ ವಸಂತ್‌ಕುಮಾರ್ | ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 162 |
| 7 | ಶ್ರೀಮತಿ ಲಕ್ಷ್ಮಿದೇವಿ | ಕಿರಿಯ ಅಭಿಯಂತರರು, ಬೆಸ್ಕಾಂ |
| 8 | ಶ್ರೀ ಶ್ರೀಧರ್ | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 9 | ಶ್ರೀಮತಿ ಉಷಾ | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 10 | ಶ್ರೀಮತಿ ಭೂದೇವಿ | ತೋಟಗಾರಿಕೆ ಇಲಾಖೆ |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ರಘು ರವರು ಸ್ವ ಪರಿಚಯ ಮಾಡಿಕೊಂಡು ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಗಿರಿನಗರ ವಾರ್ಡ್-162ರ ವ್ಯಾಪ್ತಿಯಲ್ಲಿ ರಸ್ತೆಗುಂಡಿ ಮತ್ತು ರಸ್ತೆ ಅಗೆತಗಳನ್ನು ಕಾಮಗಾರಿ ಇಲಾಖೆಯಿಂದ ನಿರ್ವಹಿಸುತ್ತಿದ್ದು, ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ತುರ್ತಾಗಿ ಕ್ರಮ ಕೈಗೊಳ್ಳಲು ನೋಡಲ್ ಅಧಿಕಾರಿಯವರು ಸಭೆಯಲ್ಲಿ ಹಾಜರಿದ್ದ ವಾರ್ಡ್ ಅಭಿಯಂತರರಿಗೆ ಸೂಚಿಸಿದರು.

2. ಗಿರಿನಗರ ವಾರ್ಡ್–162ರ ವ್ಯಾಪ್ತಿಯಲ್ಲಿ ಈಗಾಗಲೇ ಅಳವಡಿಸಿರುವ ಸಿ.ಸಿ. ಟಿ.ವಿ ಕ್ಯಾಮರಾಗಳ ಕಾರ್ಯನಿರ್ವಹಣೆಯ ಬಗ್ಗೆ ಮಾಹಿತಿ, ಹೊಸದಾಗಿ ಸಿ.ಸಿ. ಟಿ.ವಿ ಕ್ಯಾಮರಾಗಳನ್ನು ಅಳವಡಿಸಲು ಅವಶ್ಯವಿರುವ ಪ್ರದೇಶಗಳ ಮಾಹಿತಿ, ಮತ್ತು ಅವಶ್ಯವಿರುವ ಒಟ್ಟು ಸಿ.ಸಿ. ಟಿ.ವಿ ಕ್ಯಾಮರಾಗಳ ಮಾಹಿತಿಯನ್ನು ನೀಡಲು ಸಭೆಯಲ್ಲಿ ಸೂಚಿಸಲಾಯಿತು.
3. ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ವಾರ್ಡ್ ವ್ಯಾಪ್ತಿಯಲ್ಲಿ ಬರುವ ದುರಸ್ಥಿಗೊಂಡಿರುವ ಮ್ಯಾನ್ ಹೋಲ್‌ಗಳನ್ನು ಸರಿಪಡಿಸಲು ಹಾಗೂ ರಸ್ತೆಯ ಮೇಲಭಾಗ ನೋಡಲ್ ಅಧಿಕಾರಿಗಳು ಸಂಬಂಧಪಟ್ಟ ಅಭಿಯಂತರರಿಗೆ ಸಭೆಯಲ್ಲಿ ತಿಳಿಸಲಾಯಿತು.
4. ಗಿರಿನಗವರಲ್ಲಿ ತೋಟಗಾರಿಕೆ ಇಲಾಖೆಗೆಯಿಂದ ಉದ್ಯಾನವನದಲ್ಲಿ ಉದ್ಯಾನವನ ನಿರ್ವಹಣೆ, ನೀರು, ಬೀದಿ ದೀಪ, ಸಿಸಿಟಿವಿ, ಮುಂತಾದ ಅಗತ್ಯ ನಿರ್ವಾಹಣೆ ಕಾರ್ಯಗನಳನ್ನು ಕೈಗೊಳಲು ಸಮಿತಿ ಸಭೆಯಲ್ಲಿ ತೋಟಗಾರಿಕೆ ಇಲಾಖೆಗೆಯಿಂದ ಬಂದಿರುವವರಿಗೆ ಸೂಚಿಸಲಾಯಿತು.
5. ಗಿರಿನಗರ ವಾರ್ಡ್–162ರ ವ್ಯಾಪ್ತಿಯ ಗಿರಿನಗರ ಹೊಸಕೆರೆಹಳ್ಳಿ ಮುಖ್ಯ ರಸ್ತೆ ಹಾಗೂ ಅವಹಳ್ಳಿ ಮುಖ್ಯ ರಸ್ತೆ ಚರಂಡಿ ಮತ್ತು ಪಾದಚಾರಿ ಮಾರ್ಗದಲ್ಲಿ ಅನಧಿಕೃತವಾಗಿ ಇಟ್ಟಿರುವ ತಳ್ಳುವ ಗಾಡಿಗಳು ಮತ್ತು ಅಂಗಡಿಗಳನ್ನು ತೆರವು ಕಾರ್ಯಚರಣೆ ಕೈಗೊಳ್ಳುವ ಬಗ್ಗೆ ವಿಭಾಗದ ಅಭಿಯಂತರರಿಗೆ ಸೂಚಿಸಿದರು.
6. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್–19 ಪಾಸಿಟಿವ್ ಪ್ರಕರಣಗಳು ಪತ್ತೆಯಾಗಿದ್ದಲ್ಲಿ ಮೈಕ್ರೋ ಕಂಟೈನ್‌ಮೆಂಟ್ ಝೋನ್ ಹಾಗೂ ಹೋಂ ಐಸೋಲೇಷನ್‌ನಲ್ಲಿ 03 ಜನರಿಗಿಂತ ಹೆಚ್ಚಾಗಿ ಇರುವ ಮನೆಗಳಿಗೆ ಸ್ಟಾಂಪ್ ಹಾಕುವ ಕಾರ್ಯಕ್ರಮವು ಸಮರ್ಪಕವಾಗಿ ನಡೆಯುತ್ತಿದೆ ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.
7. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್–19 ಹಿನ್ನಲೆಯಲ್ಲಿ ವಾರ್ಡ್‌ನ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸಂಚಾರಿ ಟೆಸ್ಟಿಂಗ್ ಸೆಂಟರ್‌ನ್ನು (ಮೊಬೈಲ್ ಯೂನಿಟ್) ಅಳವಡಿಸಿ ಹೆಚ್ಚು ಸಂಖ್ಯೆಯಲ್ಲಿ ಕೋವಿಡ್–19 ಪರೀಕ್ಷೆಗಳನ್ನು ಸಮರ್ಪಕವಾಗಿ ನಿರ್ವಹಿಸಲು ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.
8. ವಾರ್ಡ್ ವ್ಯಾಪ್ತಿಯಲ್ಲಿ ಕಸದ ಮೇಲ್ವಿಚಾರಕರು ಕಸ ಸಂಗ್ರಹಣೆ ಹಾಗೂ ಕಸ ಬೇರ್ಪಡಿಸುವ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಣೆ ಮಾಡುವ ಬಗ್ಗೆ ಸಭೆಯಲ್ಲಿ ತಿಳಿಸಿರುತ್ತಾರೆ.
9. ವಾರ್ಡ್ ವ್ಯಾಪ್ತಿಯಲ್ಲಿ ಮಾರ್ಷಲ್‌ಗಳು ಶ್ರೀವಿದ್ಯಾನಗರ ಪಾರ್ಕ್, ಯೋಗಶ್ರೀ ಸ್ಟ್ರೀಟ್, ಹೊಸಕೆರೆಹಳ್ಳಿ ಮೈನ್ ರೋಡ್ ಹಾಗೂ ಬ್ಲಾಕ್ ಸ್ಪಾಟ್‌ಗಳಲ್ಲಿ ಸಾರ್ವಜನಿಕರು ಕಸ ಹಾಕಿದ್ದಲ್ಲಿ ದಂಡ ವಿಧಿಸಲು ನೋಡಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿರುತ್ತಾರೆ

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

08/09/21
ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 162, ಗಿರಿನಗರ

08/09/21
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 162, ಗಿರಿನಗರ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
8. ಕಛೇರಿ ಪ್ರತಿ.